ಈ) ಅಂದಾಜು 15.00 ಲಕ್ಷ (ನವೀಕರಣ ಹಾಗೂ ರಸ್ತೆ ಕಾಮಗಾರಿ ಸೇರಿ) ಬೇಕಾಗಬಹುದು.

ಉ) ಸೇರಿದೆ.

25 (76) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ;

ಅ) ಸಣ್ಣ ನೀರಾವರಿ ಕೆರೆಗಳ ಅಭಿವೃದ್ಧಿಗಾಗಿ ಅನುದಾನ ಬಿಡುಗಡೆ ಮಾಡಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ;

ಆ) ಡಾ: ಡಿ.ಎಂ. ನಂಜುಂಡಪ್ಪ ವರದಿಯನ್ವಯ ಅತೀ ಹಿಂದುಳಿದ ತಾಲ್ಲೂಕುಗಳಿಗೆ ಸಣ್ಣ ನೀರಾವರಿ ಕೆರೆಗಳ ಅಭಿವೃದ್ಧಿಗಾಗಿ ವಿಶೇಷ ಅನುದಾನ ಮಂಜೂರು ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ ?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು):

ಅ) ಕೆರೆಗಳ ಸ್ಥಿತಿ–ಗತಿಗಳನ್ನು ಆಧರಿಸಿ ಹಾಗೂ ಅಚ್ಚುಕಟ್ಟಿನಲ್ಲಿ ಬರುವ ರೈತರ ಬೇಡಿಕೆಗೆ ಅನುಗುಣವಾಗಿ ಲಭ್ಯವಿರುವ ಅನುದಾನದಲ್ಲಿ ಕೆರೆಗಳ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ. ಇದಕ್ಕಾಗಿ ಪ್ರತ್ಯೇಕವಾದ ಮಾನದಂಡಗಳು ಇರುವುದಿಲ್ಲ.

ಆ ಮತ್ತು ಇ) ಮುಂದಿನ ಆರ್ಥಿಕ ವರ್ಷದಲ್ಲಿ ಅನುದಾನದ ಲಭ್ಯತೆಯನ್ನು ಅನುಸರಿಸಿ ಈ ಬಗ್ಗೆ ಕ್ರಮ ತೆಗೆದುಕೊಳ್ಳಲಾಗುವುದು.

26 (77) ಶ್ರೀ ಜಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ) : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ;

ಅ) ಪ್ರಸ್ತುತ ವರ್ಷದ ಆಯವ್ಯಯದಲ್ಲಿ ಸರ್ಕಾರ ವಿವಿಧ ಇಲಾಖೆಗಳಿಗೆ ನೀಡಲಾದ ಅನುದಾನವೆಷ್ಟು ; (ಇಲಾಖಾವಾರು ವಿವರ ನೀಡುವುದು) ;

ಆ) ಈ ಅನುದಾನದಲ್ಲಿ ಇದುವರೆವಿಗೂ ಖರ್ಚಾಗಿರುವ ಹಣ ಎಷ್ಟು ; (ಇಲಾಖಾವಾರು ವಿವರ ಒದಗಿಸುವುದು) ;